**<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ ಜಿ. ನಮೋಶಿ ಇವರು ಮಂಡಿಸಿರುವ ನಿಯಮ [illegible]ರ ಸೂಚನೆಗೆ ಸರ್ಕಾರದ ಉತ್ತರ</u>**

ಸರಕಾರಿ ಪ್ರೌಢ ಶಾಲಾ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜುಗಳಿಗೆ ಪದೋನ್ನತಿ ನೀಡಿ ಸುಮಾರು 9 ವರ್ಷಗಳಾಗಿದ್ದು, ತದನಂತರದ ದಿನಗಳಲ್ಲಿ ಸುಮಾರು ಅರ್ಹ ಸಹ ಶಿಕ್ಷಕರು ಪದೋನ್ನತಿ ಪಡೆಯಲು ನಿರಾಶರಾಗಿರುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

* * *

ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವುದಕ್ಕೆ ಸಂಬಂಧಿಸಿದಂತೆ, ಸ್ನಾತಕೋತ್ತರ ವಿದ್ಯಾರ್ಹತೆ ಹೊಂದಿರುವ ಪ್ರೌಢ ಶಾಲಾ ಸಹ ಶಿಕ್ಷಕರುಗಳು ಗ್ರೇಡ್–2 ಇವರ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಲು ಸರ್ಕಾರದ ಆದೇಶ ಅವಶ್ಯವಿರುವುದಾಗಿ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ) ಇವರ ಪತ್ರ ದಿನಾಂಕ:13–10–2023ರಲ್ಲಿ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ರವರಿಗೆ ತಿಳಿಸಿದ್ದರು.

ಅದರಂತೆ, ಶಾಲಾ ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ)ಯ ನಾಲ್ಕು ವಿಭಾಗಗಳಲ್ಲಿನ ಸ್ನಾತಕೋತ್ತರ ಪದವಿ ಪಡೆದಿರುವ ಅರ್ಹ ಪ್ರೌಢಶಾಲಾ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಪರಿಶೀಲಿಸಿ, ಸಾಮಾನ್ಯ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ ಅಂತಿಮ ಒಂದೇ ಜೇಷ್ಠತಾ ಪಟ್ಟಿ ಮತ್ತು ವಿಷಯವಾರು ಅರ್ಹತಾ ಪಟ್ಟಿಯನ್ನು ಸಲ್ಲಿಸಲು ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ರವರ ಪತ್ರ ದಿನಾಂಕ:29–11–2023ರಂದು ಸರ್ಕಾರವನ್ನು ಕೋರಿದ್ದರು. ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರದ ಪತ್ರ ಸಂಖ್ಯೆ:ಇಪಿ 164 ಎಸ್‌ಓಹೆಚ್ 2023 ದಿನಾಂಕ:02–01–2024ರಲ್ಲಿ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಲು ಅನುಸರಿಸಬೇಕಾದ ಮಾನದಂಡಗಳ ಪ್ರಕಾರ ಹಾಗೂ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಕಲ್ಪಿಸಿರುವ ಅವಕಾಶಗಳನ್ವಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಹಂತದಲ್ಲಿಯೇ ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶಿಸಲಾಗಿತ್ತು.

ಈ ಸಂಬಂಧ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ) ಇವರ ಪತ್ರ ದಿನಾಂಕ:02–02–2024 ಮತ್ತು ದಿನಾಂಕ:07–03–2024ರಲ್ಲಿ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಬೇಕಿದ್ದಲ್ಲಿ ಅನುಸರಿಸಬೇಕಾದ ಮಾನದಂಡಗಳ ಕುರಿತು ಸರ್ಕಾರದ ಆದೇಶ ಅವಶ್ಯವಿರುವುದಾಗಿ ತಿಳಿಸುತ್ತಾ ಹಾಗೂ ಯಾವುದೇ ಶಾಸನಬದ್ಧ ಆಧಾರವಿಲ್ಲದೇ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಿದ್ದಲ್ಲಿ ಸದರಿ ಪಟ್ಟಿಯನ್ನು ಪ್ರಶ್ನಿಸಿ ಮಾನ್ಯ ನ್ಯಾಯಾಲಯದಲ್ಲಿ ದಾವೆ ಹೂಡಿದ್ದಲ್ಲಿ ಪಟ್ಟಿ ತಯಾರಿಸುವಲ್ಲಿ ಇಲಾಖೆಯ ಕ್ರಮವನ್ನು ಊರ್ಜಿತಗೊಳಿಸುವ ಯಾವುದೇ ದಾಖಲೆಗಳು ಲಭ್ಯವಿಲ್ಲದೇ ಸದರಿ ಪಟ್ಟಿಯನ್ನು ಘನ ನ್ಯಾಯಾಲಯವು ಅನೂರ್ಜಿತಗೊಳಿಸುವ ಸಾಧ್ಯತೆ ಇರುವುದಾಗಿ ತಿಳಿಸಿರುತ್ತಾರೆ. ಅಲ್ಲದೇ ಈಗ ಜೇಷ್ಠತಾ ನಿಯಮಗಳು 1975ರ ಅನುಸಾರ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರ ವೃಂದದ ವಿಭಾಗವಾರು ಜೇಷ್ಠತಾ ಪಟ್ಟಿಗಳನ್ನು ತಯಾರಿಸಿ ವಿಭಾಗವಾರು ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದಕ್ಕೆ ಬಡ್ತಿ ನೀಡುತ್ತಿರುವ ಪ್ರಕ್ರಿಯೆಯನ್ನು ಪ್ರಶ್ನಿಸುವ ಸಾಧ್ಯತೆ ಇರುವುದಾಗಿ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ), ಬೆಂಗಳೂರು ಇವರಿಗೆ ಪತ್ರ ಮುಖೇನ ತಿಳಿಸಿರುತ್ತಾರೆ.

ಮೇಲಿನಂತೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ) ಇವರ ಪತ್ರಗಳ ಹಿನ್ನೆಲೆಯಲ್ಲಿ ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ ಯಾವುದೇ ನಿರ್ದೇಶನ ಅಥವಾ ಕ್ರಮಕೈಗೊಳ್ಳುವ ಸಕ್ಷಮ ಪ್ರಾಧಿಕಾರ ಸರ್ಕಾರವಾಗಿರುವುದರಿಂದ, ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಲು ಅನುಸರಿಸಬೇಕಾದ ಮಾನದಂಡಗಳ ಬಗ್ಗೆ ಸೂಕ್ತ ನಿರ್ದೇಶನ ನೀಡುವಂತೆ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ), ಬೆಂಗಳೂರು ಇವರು ದಿನಾಂಕ:23–04–2024ರಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತುತ ಶಾಲಾ ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ)ಯ ನಾಲ್ಕು ವಿಭಾಗಗಳಲ್ಲಿ ಸ್ನಾಕೋತ್ತರ ಪದವಿ ಪಡೆದ ಅರ್ಹ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಪರಿಶೀಲಿಸಿ ಸಾಮಾನ್ಯ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ ಅಂತಿಮ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿ ಮತ್ತು ವಿಷಯವಾರು ಅರ್ಹತಾ ಪಟ್ಟಿಗಳನ್ನು ಸಿದ್ಧಪಡಿಸುವ ಪ್ರಸ್ತಾವನೆಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಭಿಪ್ರಾಯ ಕೋರಲಾಗಿದ್ದು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಅಭಿಪ್ರಾಯ ಸ್ವೀಕೃತವಾದ ನಂತರ ನಿಯಮಾನುಸಾರ ಜೇಷ್ಠತಾ ಪಟ್ಟಿಯನ್ನು ಹೊರಡಿಸಿ, ತದನಂತರ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಬಗ್ಗೆ ನಿಯಮಾನುಸಾರ ಕ್ರಮವಹಿಸಲಾಗುವುದು.

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.

ಸಂಖ್ಯೆ: ಇಪಿ 168 ಡಿಜಿಡಬ್ಲ್ಯೂ 2024